ರೈತ ಸ್ನೇಹಿ ಸಾಗಾಣಿಕೆ

9 (18) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ): ಮಾನ್ಯ ಸಹಕಾರ, ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರು ಕಡಿಮೆ ಖರ್ಚಿನಲ್ಲಿ ಹಣ್ಣು ತರಕಾರಿಗಳನ್ನು ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗುವಂತೆ ರೈತ ಸ್ನೇಹಿ ಸಾಗಾಣಿಕೆ ಯೋಜನೆಯನ್ನು ರೂಪಿಸಿರುವುದು ನಿಜವೇ ;

ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಬೀದರ್ ಜಿಲ್ಲೆಯ ಎಷ್ಟು ಜನ ರೈತರಿಗೆ ಈ ಯೋಜನೆಯಿಂದ ಅನುಕೂಲವಾಗಿದೆ ; (ವಿಧಾನ ಸಭಾ ಕ್ಷೇತ್ರವಾರು ವಿವರ ಒದಗಿಸುವುದು)

ಇ) ಈ ಯೋಜನೆಯನ್ನು ಕಾರ್ಯಗತಗೊಳಿಸಲು ಇಲ್ಲಿಯವರೆಗೆ ವಿವಿಧ ಜಿಲ್ಲೆಗಳಿಗೆ ಎಷ್ಟೆಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

ಈ) ಯಾವ ಯಾವ ಎಪಿಎಂಸಿಗಳಲ್ಲಿ ಈ ಯೋಜನೆ ಹೆಚ್ಚು ಯಶಸ್ವಿಯಾಗಿದೆ ; (ವಿವರ ನೀಡುವುದು) ?

ಶ್ರೀ ಲಕ್ಷ್ಮಣ ಸ. ಸವದಿ (ಸಹಕಾರ, ಕೃಷಿ ಮಾರುಕಟ್ಟೆ ಸಚಿವರು):

ಅ), ಆ), ಇ) ಮತ್ತು ಈ) ರೈತರಿಗೆ ಕಡಿಮೆ ಖರ್ಚಿನಲ್ಲಿ ಹಣ್ಣು ತರಕಾರಿಗಳನ್ನು ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗುವಂತೆ ರೈತ ಸ್ನೇಹಿ ಸಾಗಾಣಿಕೆ ಯೋಜನೆಯನ್ನು ರೂಪಿಸುವ ಬಗ್ಗೆ ಮನವಿಗಳು ಬಂದಿವೆ. ಇದರ ಸಾಧಕ ಬಾಧಕಗಳ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆ.